ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ಪ್ರಸಕ್ತ ಸಾಲಿನಲ್ಲಿ (2012–13) ಜೂನ್ 2012ರ ತಿಂಗಳಿನಲ್ಲಿ ರಾಜ್ಯದಲ್ಲಿ ವಿವಿಧ ಮೂಲಗಳಿಂದ ಪೂರೈಕೆಯಾದ ವಿದ್ಯುತ್ತಿನ ಒಟ್ಟು ಪ್ರಮಾಣ 4597 ಮಿಲಿಯನ್ ಯೂನಿಟ್‌ಗಳು.

ಆ) ಮತ್ತು ಇ)

ವಿದ್ಯುತ್ ಪ್ರಸರಣಾ ಮತ್ತು ವಿತರಣೆ ನಷ್ಟವು 2011–12ನೇ ಸಾಲಿನಲ್ಲಿ ಶೇಕಡ 21.59 ಇರುತ್ತದೆ.

ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆ ಮಂಜೂರು ಮಾಡುವುದು

727 (269) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) : ಮಾನ್ಯ ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡುವುದಾಗಿ ಕಳೆದ 4 ಅಧಿವೇಶನದಲ್ಲಿ ಸರಕಾರ ಭರವಸೆ ನೀಡುವುದು ನಿಜವೆ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಸಂಚಾರಿ ಪೊಲೀಸ್ ಠಾಣೆಗೆ ಮಂಜೂರಾತಿ ನೀಡದಿರಲು ಕಾರಣಗಳೇನು;

ಇ) ಸಿಂಧನೂರು ನಗರದಲ್ಲಿ ಸಂಚಾರಿ ಪೊಲೀಸ್ ಠಾಣೆ ಇಲ್ಲದಿರುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ಈಗಲಾದರೂ ಸಂಚಾರಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೆ;

ಉ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಆರ್. ಅಶೋಕ್ (ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಸಚಿವರು) :

ಅ) ಹೌದು.

ಆ) ಮತ್ತು ಇ) ಈ) ಉ)

2012–13ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಬೆಂಗಳೂರು ನಗರದಲ್ಲಿ 3 ಸಂಚಾರಿ ಪೊಲೀಸ್ ಠಾಣೆಗಳು ಹಾಗೂ ರಾಜ್ಯದ ಇತರೆ ಜಿಲ್ಲೆಗಳಲ್ಲಿ 07 ಹೊಸ ಪೊಲೀಸ್ ಠಾಣೆಗಳನ್ನು ಸೇರಿದಂತೆ ಒಟ್ಟು 10 ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲು ಘೋಷಿಸಲಾಗಿದೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಪೊಲೀಸ್ ಠಾಣೆಯನ್ನು ತೆರೆಯಲು ಮಂಜೂರಾತಿ ನೀಡಿ ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ 91 ಪಿಓಪಿ 2012 ದಿನಾಂಕ: 03/07/2012ನ್ನು ಹೊರಡಿಸಲಾಗಿದೆ.

ರಾಜ್ಯದಲ್ಲಿ ಬಹಳಷ್ಟು ಕಡೆ ಪೊಲೀಸ್ ಠಾಣೆ ಹಾಗೂ ಸಂಚಾರಿ ಪೊಲೀಸ್ ಠಾಣೆ ಸ್ಥಾಪನೆ ಮಾಡಲು ಕೋರಿಕೆಗಳು ಇರುತ್ತದೆ. ರಾಜ್ಯದ ಸಂಪನ್ಮೂಲ ಕೊರತೆಯಿಂದ ಒಂದೇ ಹಂತದಲ್ಲಿ ಸ್ಥಾಪಿಸಲು ಸಾಧ್ಯವಾಗುವುದಿಲ್ಲ. ಹಂತ ಹಂತವಾಗಿ ಸ್ಥಾಪನೆ ಮಾಡಲಾಗುತ್ತದೆ. ಆದ್ದರಿಂದ ಸಂಪನ್ಮೂಲದ ಲಭ್ಯತೆಗೆ ಅನುಗುಣವಾಗಿ ಹಾಗೂ ಆಧ್ಯತೆಯ ಮೇರೆಗೆ ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆಯನ್ನು ಸ್ಥಾಪಿಸುವ ಕುರಿತು ಪರಿಶೀಲಿಸಲಾಗುವುದು.

ವಿಧಾನ ಸೌಧ, ವಿಕಾಸ ಸೌಧ ಮತ್ತು ಬಹುಮಹಡಿ ಕಟ್ಟಡಗಳಿಗೆ ಅಗ್ನಿಶಾಮಕ ಇಲಾಖೆಯಿಂದ N.O.C. ಪಡೆಯುವುದು

692 (275) ಶ್ರೀ ಅಶೋಕ್ ಮಹದೇವಪ್ಪ ಪಟ್ಟಣ (ರಾಮದುರ್ಗ) : ಮಾನ್ಯ ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳಿಗೆ ಅಗ್ನಿಶಾಮಕ ಇಲಾಖೆಯ ನಿರಾಕ್ಷೇಪಣಾ ಪತ್ರವನ್ನು ಪಡೆಯಲಾಗಿದೆಯೇ?